**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 15 ಬಿಎಲ್‌ಡಿ 2019
ಅಡಕ:

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:14-11-2019.

# ಸುತ್ತೋಲೆ

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯಡಿ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮುಖ್ಯ ಕಟ್ಟಡ, ಹಾಸ್ಟೆಲ್ ಕಟ್ಟಡ, ಹೆಚ್ಚುವರಿ ಕೊಠಡಿ, ವರ್ಕ್‌ಷಾಪ್ ಕಟ್ಟಡ, ಪ್ರಯೋಗಾಲಯ ಕಟ್ಟಡ, ಆಡಿಟೋರಿಯಂ ಕಟ್ಟಡ ಮತ್ತು ಇತರೇ ದುರಸ್ಥಿ ಕಾಮಗಾರಿಗಳನ್ನು ಹಸ್ತಾಂತರ ಮಾಡಿಕೊಳ್ಳುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ/ಹೊಸದಾಗಿ ಮಂಜೂರಾದ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವಿವಿಧ ಯೋಜನೆಗಳಡಿ ನಿರ್ಮಿಸಲಾಗುತ್ತಿರುವ ಮುಖ್ಯ ಕಟ್ಟಡ, ಹಾಸ್ಟೆಲ್ ಕಟ್ಟಡ, ಹೆಚ್ಚುವರಿ ಕೊಠಡಿ, ವರ್ಕ್‌ಷಾಪ್ ಕಟ್ಟಡ, ಪ್ರಯೋಗಾಲಯ ಕಟ್ಟಡ, ಆಡಿಟೋರಿಯಂ ಕಟ್ಟಡ ಮತ್ತು ಇತರೇ ದುರಸ್ಥಿ ಕಾಮಗಾರಿಗಳನ್ನು ವಿವಿಧ ನಿರ್ಮಾಣ ಸಂಸ್ಥೆಯಿಂದ ನಿರ್ವಹಿಸಲಾಗುತ್ತಿದೆ.

ಈ ದಿಸೆಯಲ್ಲಿ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪೂರ್ಣಗೊಂಡಿರುವ/ಪೂರ್ಣಗೊಳ್ಳುವ ಮುಖ್ಯ ಕಟ್ಟಡ, ಹಾಸ್ಟೆಲ್ ಕಟ್ಟಡ, ಹೆಚ್ಚುವರಿ ಕೊಠಡಿ, ವರ್ಕ್‌ಷಾಪ್ ಕಟ್ಟಡ, ಪ್ರಯೋಗಾಲಯ ಕಟ್ಟಡ, ಆಡಿಟೋರಿಯಂ ಕಟ್ಟಡ ಮತ್ತು ಇತರೇ ದುರಸ್ಥಿ ಕಾಮಗಾರಿಗಳನ್ನು ಸಂಸ್ಥೆಯ ಸಿವಿಲ್ ವಿಭಾಗದ ಮುಖ್ಯಸ್ಥರಿಂದ ಅನುಮೋದಿತ ಅಂದಾಜು ಪಟ್ಟಿಯಂತೆ ಏಜೆನ್ಸಿಯವರು ನಿರ್ಮಾಣ ಮಾಡಿರುವುದನ್ನು ಪರಿಶೀಲಿಸಿ ಈ ಕೆಳಕಂಡ ದಾಖಲೆಗಳನ್ನು ಏಜೆನ್ಸಿಯಿಂದ ಕಡ್ಡಾಯವಾಗಿ (ಮೂಲ ಪ್ರತಿ) ಪಡೆದು ಹಸ್ತಾಂತರಿಸಿಕೊಳ್ಳಲು ಸೂಚಿಸಿದೆ.

ಮುಂದುವರೆದು, ಸದರಿ ದಾಖಲೆಗಳ ಒಂದು ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

1. Quality test report.
2. Handing over note.
3. Project completion report.
4. Photos & Utilization certificates.
5. Final bill copies.

ನಿರ್ದೇಶಕರು

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001

**ಇವರಿಗೆ:**

1. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಮಾಹಿತಿಗಾಗಿ ಹಾಗೂ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.
2. ಪ್ರಿನ್ಸಿಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.